**All India Radio: Bangalore**
**National Bulletin In Kannada**
**17.07.2025  1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**17.07.2025  1.10 p.m.**

**<><><><>**

ಮುಖ್ಯಾಂಶಗಳು

1. ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ೨೦೨೪-೨೫ನೇ ಸಾಲಿನ ಸ್ವಚ್ಛ ಸರ್ವೇಕ್ಷಣ ಪ್ರಶಸ್ತಿ ಪ್ರದಾನ
2. ದೇಶೀಯವಾಗಿ ಅಭಿವೃದ್ಧಿಪಡಿಸಲಾದ ವಾಯು ರಕ್ಷಣಾ ವ್ಯವಸ್ಥೆ 'ಆಕಾಶ್ ಪ್ರೈಮ್' ಪರೀಕ್ಷಾರ್ಥ ಪ್ರಯೋಗ ಯಶಸ್ವಿ
3. ಭಾರತ-ಅಮೆರಿಕ ನಡುವಿನ ಬಹು ನಿರೀಕ್ಷಿತ ಮಧ್ಯಂತರ ವ್ಯಾಪಾರ ಮಾತುಕತೆ ಶೀಘ್ರ ಪೂರ್ಣ- ಡೊನಾಲ್ಡ್ ಟ್ರಂಪ್
4. ಜಪಾನ್ ಓಪನ್ ಬ್ಯಾಡ್ಮಿಂಟನ್: ಪುರುಷರ ಸಿಂಗಲ್ಸ್ ಕ್ವಾರ್ಟರ್ ಫೈನಲ್ ಪೂರ್ವ ಪಂದ್ಯದಲ್ಲಿಂದು ಲಕ್ಷ್ಯ ಸೇನ್- ಕೊಡೈ ನರೋಕಾ ಮುಖಾಮುಖಿ

<><><><>

ಸ್ವಚ್ಛತೆಯು ದೇಶದ ಸಾಂಸ್ಕೃತಿಕ ಪ್ರಜ್ಞೆಯ ಅಡಿಪಾಯ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಸಮಾರಂಭದಲ್ಲಿ ಸ್ವಚ್ಛ ಸರ್ವೇಕ್ಷಣ ೨೦೨೪-೨೫ ಪ್ರಶಸ್ತಿಗಳನ್ನು ಪ್ರದಾನ ಮಾಡಿದ ಸಂದರ್ಭದಲ್ಲಿ ಸ್ವಚ್ಛ ಭಾರತ ಮಿ?ನ್ ಅಡಿಯಲ್ಲಿ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಪ್ರಯತ್ನಗಳನ್ನು ಶ್ಲಾಘಿಸಿದ ಅವರು, ಸ್ವಚ್ಛ ಸರ್ವೇಕ್ಷಣವು ಯಶಸ್ವಿ ಉಪಕ್ರಮ ಎಂಬುದು ಸಾಬೀತಾಗಿದೆ ಎಂದರು.

ಧ್ವನಿ : ರಾಷ್ಟ್ರಪತಿ ದ್ರೌಪದಿ ಮುರ್ಮು (೨೬ ಸೆಕೆಂಡುಗಳು)

ಕೇಂದ್ರ ಸರ್ಕಾರದ ವಾರ್ಷಿಕ ಸ್ವಚ್ಛತಾ ಸಮೀಕ್ಷೆಯಲ್ಲಿ, ಇಂದೋರ್, ಸತತ ಎಂಟನೇ ವ?ವೂ ಭಾರತದ ಅತ್ಯಂತ ಸ್ವಚ್ಛ ನಗರ ಎಂಬ ಬಿರುದನ್ನು ಉಳಿಸಿಕೊಂಡಿದೆ. ಸೂರತ್ ಎರಡನೇ ಸ್ಥಾನವನ್ನು ಪಡೆದುಕೊಂಡರೆ, ನವಿ ಮುಂಬೈ ಮೂರನೇ ಸ್ಥಾನದಲ್ಲಿದೆ.

ಈ ಸಂದರ್ಭದಲ್ಲಿ, ವಿವಿಧ ವಿಭಾಗಗಳಲ್ಲಿ ಒಟ್ಟು ೭೮ ಪ್ರಶಸ್ತಿಗಳನ್ನು ನೀಡಲಾಯಿತು. ಈ ವ?, ಸೂಪರ್ ಸ್ವಚ್ಛ ಲೀಗ್ ನಗರಗಳು ಮತ್ತು ಐದು ವಿಭಿನ್ನ ಜನಸಂಖ್ಯಾ ವಿಭಾಗಗಳಲ್ಲಿ ಅಗ್ರ ಮೂರು ಸ್ವಚ್ಛ ನಗರಗಳು ಸೇರಿದಂತೆ ನಾಲ್ಕು ವಿಭಾಗಗಳಲ್ಲಿ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಯಿತು.

<><><><>

ದೇಶೀಯವಾಗಿ ಅಭಿವೃದ್ಧಿಪಡಿಸಲಾದ ವಾಯು ರಕ್ಷಣಾ ವ್ಯವಸ್ಥೆ 'ಆಕಾಶ್ ಪ್ರೈಮ್'ನ ಯಶಸ್ವಿ ಪರೀಕ್ಷಾರ್ಥ ಪ್ರಯೋಗಗಳನ್ನು ಲಡಾಖ್‌ನಲ್ಲಿ ಭಾರತೀಯ ಸೇನೆ ನಡೆಸಿದೆ. ಪೂರ್ವ ಲಡಾಖ್‌ನಲ್ಲಿ ೧೫ ಸಾವಿರ ಅಡಿಗಳಿಗಿಂತ ಹೆಚ್ಚು ಎತ್ತರದಲ್ಲಿ ಈ ಪ್ರಯೋಗವನ್ನು ನಡೆಸಲಾಯಿತು. ಎರಡು ದಿನಗಳ ಈ ಪ್ರಯೋಗವನ್ನು ವಾಯು ರಕ್ಷಣಾ ಪಡೆ ಹಾಗೂ ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆಯ ಹಿರಿಯ ಅಧಿಕಾರಿಗಳು ನಡೆಸಿದರು. 'ಆಕಾಶ್ ಪ್ರೈಮ್' ವ್ಯವಸ್ಥೆಯ ಮೂಲಕ ಕ್ಷಿಪಣಿಯನ್ನು ೪ ಸಾವಿರದ ೫೦೦ ಮೀಟರ್ ಎತ್ತರದಲ್ಲಿ ನಿಯೋಜಿಸಬಹುದು ಮತ್ತು ಸುಮಾರು ೨೫ ರಿಂದ ೩೦ ಕಿಲೋ ಮೀಟರ್ ದೂರದಲ್ಲಿರುವ ಗುರಿಗಳನ್ನು ಹೊಡೆದುರುಳಿಸಬಹುದು.

<><><><>

ದೇಶದಲ್ಲಿ ಹತ್ತು ಲಕ್ಷ ನಾಗರಿಕರಿಗೆ ಕೃತಕ ಬುದ್ಧಿಮತ್ತೆ ತರಬೇತಿಯನ್ನು ಉಚಿತವಾಗಿ ನೀಡಲಾಗುವುದು. ಇದರಲ್ಲಿ ಗ್ರಾಮ ಮಟ್ಟದ ಉದ್ಯಮಿಗಳಿಗೆ ಆದ್ಯತೆ ನೀಡಲಾಗುವುದು ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಘೋಷಿಸಿದ್ದಾರೆ. ಡಿಜಿಟಲ್ ಇಂಡಿಯಾದ ೧೦ ವರ್ಷಗಳನ್ನು ಆಚರಿಸಲು ನವದೆಹಲಿಯಲ್ಲಿ ಆಯೋಜಿಸಲಾದ ಸಾಮಾನ್ಯ ಸೇವಾ ಕೇಂದ್ರ-ಸಿಎಸ್‌ಸಿ ದಿವಸ್ ಕಾರ್ಯಕ್ರಮದಲ್ಲಿ ಅಶ್ವಿನಿ ವೈಷ್ಣವ್ ಈ ಘೋಷಣೆ ಮಾಡಿದ್ದಾರೆ. ದೇಶಾದ್ಯಂತ ಗ್ರಾಮ ಮಟ್ಟದ ಉದ್ಯಮಿಗಳು ಡಿಜಿಟಲ್ ಇಂಡಿಯಾದ ಪ್ರಯೋಜನಗಳನ್ನು ಪ್ರತಿಯೊಬ್ಬ ನಾಗರಿಕರಿಗೂ ತಲುಪಿಸುವ ಮೂಲಕ ಗಮನಾರ್ಹ ಕೊಡುಗೆ ನೀಡಿದ್ದಾರೆ ಎಂದರು. ದೇಶದ ಸುಮಾರು ೯೦ ಪ್ರತಿಶತ ಹಳ್ಳಿಗಳನ್ನು ಸಿಎಸ್‌ಸಿ ತಲುಪಿದೆ. ಯುಪಿಐ ಪಾವತಿಗಳು ವೀಸಾ ವಹಿವಾಟುಗಳನ್ನು ಮೀರಿಸಿದೆ. ಇದು ದೇಶದಲ್ಲಿ ಚಹಾ ಮಾರಾಟಗಾರ ಅಥವಾ ತರಕಾರಿ ಮಾರಾಟಗಾರ ಡಿಜಿಟಲ್ ಪಾವತಿಗಳನ್ನು ಹೇಗೆ ಬಳಸಬಹುದು ಎಂಬುದನ್ನು ಜಗತ್ತಿಗೆ ತೋರಿಸುತ್ತದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

<><><><>

ಭಾರತ ಮತ್ತು ಅಮೆರಿಕ ನಡುವೆ ನಡೆಯುತ್ತಿರುವ ಬಹು ನಿರೀಕ್ಷಿತ ಮಧ್ಯಂತರ ವ್ಯಾಪಾರ ಮಾತುಕತೆಗಳು ಶೀಘ್ರದಲ್ಲೇ ಪೂರ್ಣಗೊಳ್ಳಲಿವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಭಾರತ ಮತ್ತು ಅಮೆರಿಕ ನಡುವಿನ ಮಾತುಕತೆಗಳು ಪ್ರಗತಿಯಲ್ಲಿವೆ. ಪ್ರಸ್ತಾವಿತ ಒಪ್ಪಂದವು ಅಮೆರಿಕ ಮತ್ತು ಇಂಡೋನೇಷ್ಯಾ ನಡುವಿನ ವ್ಯಾಪಾರ ಒಪ್ಪಂದಕ್ಕೆ ಅನುಗುಣವಾಗಿ ಅಮೆರಿಕದ ಕಂಪನಿಗಳಿಗೆ ಭಾರತೀಯ ಮಾರುಕಟ್ಟೆಗೆ ಹೆಚ್ಚಿನ ಪ್ರವೇಶವನ್ನು ಒದಗಿಸುತ್ತದೆ ಎಂದು ಡೊನಾಲ್ಡ್ ಟ್ರಂಪ್ ತಿಳಿಸಿದರು.

<><><>

ಬಿಹಾರ ಸರ್ಕಾರ, ಆಗಸ್ಟ್ ೧ ರಿಂದ ಗೃಹ ಬಳಕೆದಾರರಿಗೆ ೧೨೫ ಯೂನಿಟ್‌ಗಳವರೆಗೆ ಉಚಿತ ವಿದ್ಯುತ್ ಘೋಷಿಸಿದೆ. ಇದು ಜುಲೈ ತಿಂಗಳಿನಿಂದಲೇ ಬಿಲ್‌ನಲ್ಲಿ ಪ್ರತಿಫಲಿಸಲು ಪ್ರಾರಂಭಿಸುತ್ತದೆ. ಬಿಹಾರದ ಒಟ್ಟು ೧ ಕೋಟಿ ೬೭ ಲಕ್ಷ ಕುಟುಂಬಗಳಿಗೆ ಇದರಿಂದ ಪ್ರಯೋಜನವಾಗಲಿದೆ ಎಂದು ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಹೇಳಿದ್ದಾರೆ.

<><><>

ಪ್ರಧಾನಿ ನರೇಂದ್ರ ಮೋದಿ ನಾಳೆ ಬಿಹಾರ ಮತ್ತು ಪಶ್ಚಿಮ ಬಂಗಾಳಕ್ಕೆ ಭೇಟಿ ನೀಡಲಿದ್ದಾರೆ. ಬಿಹಾರ ಭೇಟಿಯ ಸಮಯದಲ್ಲಿ, ಪ್ರಧಾನಿಯವರು ಮೋತಿಹಾರಿಯಲ್ಲಿ ಏಳು ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಇದೇ ವೇಳೆ ನಾಲ್ಕು ನೂತನ ಅಮೃತ್ ಭಾರತ್ ರೈಲುಗಳಿಗೆ ಅವರು ಚಾಲನೆ ನೀಡಲಿದ್ದಾರೆ. ನಂತರ ದೀನದಯಾಳ್ ಅಂತ್ಯೋದಯ ಯೋಜನೆ, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿ?ನ್ ಅಡಿಯಲ್ಲಿ ಬಿಹಾರದಲ್ಲಿ ಸುಮಾರು ೬೧ ಸಾವಿರ ೫೦೦ ಸ್ವ-ಸಹಾಯ ಗುಂಪುಗಳಿಗೆ ೪೦೦ ಕೋಟಿ ರೂಪಾಯಿಗಳನ್ನು ಪ್ರಧಾನಿ ನರೇಂದ್ರ ಮೋದಿ ಬಿಡುಗಡೆ ಮಾಡಲಿದ್ದಾರೆ.

<><><>

ಆಧಾರ್ ತಂತ್ರಾಂಶದ ನಿಖರತೆ ಮತ್ತು ಸಮಗ್ರತೆಯನ್ನು ಕಾಪಾಡಿಕೊಳ್ಳಲು, ಮೃತ ವ್ಯಕ್ತಿಗಳ ಆಧಾರ್ ಸಂಖ್ಯೆಗಳನ್ನು ನಿಷ್ಕ್ರಿಯಗೊಳಿಸಲು ಭಾರತೀಯ ವಿಶಿಷ್ಟ ಗುರುತಿನ ಪ್ರಾಧಿಕಾರ ಮುಂದಾಗಿದೆ. ನಾಗರಿಕ ನೋಂದಣಿ ವ್ಯವಸ್ಥೆ ಬಳಸಿಕೊಂಡು ೨೪ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಯುಐಡಿಎಐ ಗೆ ಸುಮಾರು ೧.೫೫ ಕೋಟಿ ಸಾವಿನ ದಾಖಲೆಗಳನ್ನು

ಭಾರತದ ರಿಜಿಸ್ಟ್ರಾರ್ ಜನರಲ್ ಒದಗಿಸಿದೆ ಎಂದು ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ತಿಳಿಸಿದೆ.

<><><>

ಹಿಂದಿನ ಆಮ್ ಆದ್ಮಿ ಪಕ್ಷದ ಸರ್ಕಾರದ ಅವಧಿಯಲ್ಲಿ 'ಜೈ ಭೀಮ್ ಮುಖ್ಯಮಂತ್ರಿ ಪ್ರತಿಭಾ ಅಭಿವೃದ್ಧಿ ಯೋಜನೆ'ಯಲ್ಲಿ ನಡೆದಿದೆ ಎನ್ನಲಾದ ಅಕ್ರಮಗಳ ಬಗ್ಗೆ ದೆಹಲಿ ಸರ್ಕಾರ ಭ್ರಷ್ಟಾಚಾರ ನಿಗ್ರಹ ದಳಕ್ಕೆ ತನಿಖೆಗೆ ಆದೇಶಿಸಿದೆ.ಎಈ ಕುರಿತು ನವದೆಹಲಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ದೆಹಲಿ ಶಿಕ್ಷಣ ಸಚಿವ ಆಶಿಶ್ ಸೂದ್, ಕೋವಿಡ್-೧೯ ಅವಧಿಯಲ್ಲಿ ಆಮ್ ಆದ್ಮಿ ಪಕ್ಷವು ಈ ಯೋಜನೆಯಡಿಯಲ್ಲಿ ೧೪೫ ಕೋಟಿ ರೂಪಾಯಿಗಳ ಹಗರಣ ಮಾಡಿದೆ ಎಂದು ಆರೋಪಿಸಿದರು. ಈ ವಿಷಯದ ಬಗ್ಗೆ ತನಿಖೆಗೆ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಶಿಫಾರಸು ಮಾಡಿದ್ದಾರೆ. ನಂತರ ಲೆಫ್ಟಿನೆಂಟ್ ಗವರ್ನರ್ ವಿನಯ್ ಕುಮಾರ್ ಸಕ್ಸೇನಾ ತನಿಖೆ ಆರಂಭಿಸಲು ಭ್ರಷ್ಟಾಚಾರ ನಿಗ್ರಹ ದಳಕ್ಕೆ ನಿರ್ದೇಶನ ನೀಡಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

<><><>

ಜಪಾನ್ ಓಪನ್ ಬ್ಯಾಡ್ಮಿಂಟನ್‌ನಲ್ಲಿ, ಇಂದು ಟೋಕಿಯೊದಲ್ಲಿ ನಡೆಯಲಿರುವ ಪುರುಷರ ಸಿಂಗಲ್ಸ್ ಕ್ವಾರ್ಟರ್ ಫೈನಲ್ ಪೂರ್ವ ಪಂದ್ಯದಲ್ಲಿ ಭಾರತದ ಸ್ಟಾರ್ ಶಟ್ಲರ್ ಲಕ್ಷ್ಯ ಸೇನ್, ಜಪಾನ್‌ನ ಕೊಡೈ ನರೋಕಾ ಅವರನ್ನು ಎದುರಿಸಲಿದ್ದಾರೆ.ಎಪುರುಷರ ಡಬಲ್ಸ್‌ನಲ್ಲಿ, ಭಾರತದ ಚಿರಾಗ್ ಶೆಟ್ಟಿ ಮತ್ತು ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಜೋಡಿ, ಕ್ವಾರ್ಟರ್ ಫೈನಲ್ ಪೂರ್ವ ಪಂದ್ಯದಲ್ಲಿ ಚೀನಾದ ವಾಂಗ್ ಚಾಂಗ್ ಮತ್ತು ಲಿಯಾಂಗ್ ವೀಕೆಂಗ್ ಜೋಡಿಯನ್ನು ಎದುರಿಸಲಿದ್ದಾರೆ.

<><><>

ಲಾಸ್ ವೇಗಾಸ್‌ನಲ್ಲಿ ನಡೆದ ಫ್ರೀಸ್ಟೈಲ್ ಗ್ರ್ಯಾಂಡ್ ಸ್ಲ್ಯಾಮ್ ಚೆಸ್ ಪಂದ್ಯಾವಳಿಯಲ್ಲಿ ಭಾರತದ ಗ್ರ್ಯಾಂಡ್‌ಮಾಸ್ಟರ್ ಪ್ರಜ್ಞಾನಂದ ವಿಶ್ವದ ನಂಬರ್ ಒನ್ ಆಟಗಾರ ಮ್ಯಾಗ್ನಸ್ ಕಾರ್ಲ್‌ಸೆನ್ ಸೋಲಿಸುವ ಮೂಲಕ ಕ್ವಾರ್ಟರ್ ಫೈನಲ್‌ಗೆ ಅರ್ಹತೆ ಪಡೆದಿದ್ದಾರೆ. ಈ ಮೂಲಕ ಕಾರ್ಲ್‌ಸನ್ ಸ್ಪರ್ಧೆಯಿಂದಲೇ ಹೊರಬಿದ್ದಿದ್ದಾರೆ.

<><><>

ಹಂಗೇರಿಯ ಬುಡಾಪೆಸ್ಟ್‌ನಲ್ಲಿ ಇಂದಿನಿಂದ ನಡೆಯಲಿರುವ ಪಾಲಿಯಕ್ ಇಮ್ರೆ ಮತ್ತು ವರ್ಗಾ ಜಾನೋಸ್ ಸ್ಮಾರಕ ಕುಸ್ತಿ ಪಂದ್ಯಾವಳಿಯಲ್ಲಿ ಭಾರತದ ಅಗ್ರ ಕುಸ್ತಿಪಟುಗಳು ಸ್ಪರ್ಧಿಸಲಿದ್ದಾರೆ. ೪ ದಿನಗಳ ಈ ಸ್ಪರ್ಧೆಯು ಇದೇ ೨೦ ರವರೆಗೆ ನಡೆಯಲಿದೆ. ವಿಶ್ವ ಚಾಂಪಿಯನ್‌ಶಿಪ್ ಪದಕ ವಿಜೇತೆ

ಆಂಟಿಮ್ ಪಂಗಲ್ ನೇತೃತ್ವದ ೨೨ ಸದಸ್ಯರ ಭಾರತೀಯ ತಂಡವು ಭಾರತವನ್ನು ಪ್ರತಿನಿಧಿಸಲಿದೆ. ಪ್ರಸ್ತುತ ಏಷ್ಯನ್ ಚಾಂಪಿಯನ್ ಮನೀಷಾ ಭನ್ವಾಲಾ ಕೂಡ ಪದಕದ ಗುರಿಯನ್ನು ಹೊಂದಿದ್ದಾರೆ. ಇದಲ್ಲದೆ, ನೇಹಾ, ಪ್ರಿಯಾ, ಸುಜೀತ್ ಕಲ್ಕಲ್ ಮತ್ತು ಜೈದೀಪ್ ಅವರಂತಹ ಉದಯೋನ್ಮುಖ ತಾರೆಗಳು ಪದಕ ಗೆಲ್ಲುವ ತವಕದಲ್ಲಿದ್ದಾರೆ. ಕ್ರೊಯೇಷಿಯಾದ ಜಾಗ್ರೆಬ್‌ನಲ್ಲಿ ನಡೆಯಲಿರುವ ವಿಶ್ವ ಚಾಂಪಿಯನ್‌ಶಿಪ್‌ಗಾಗಿ ಉತ್ತಮ ಶ್ರೇಯಾಂಕ ಗಳಿಸಲು ಕುಸ್ತಿಪಟುಗಳಿಗೆ ಈ ಪಂದ್ಯಾವಳಿ ಸಹಕಾರಿಯಾಗಿದೆ.

<><><>

ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿಯ ವಾರ್ಷಿಕ ಸಮ್ಮೇಳನ ಇಂದಿನಿಂದ ಸಿಂಗಾಪುರದಲ್ಲಿ ಆಯೋಜನೆಗೊಂಡಿದ್ದು, ಲಾಸ್ ಏಂಜಲೀಸ್‌ನಲ್ಲಿ ೨೦೨೮ ರ ಒಲಿಂಪಿಕ್ ಕ್ರೀಡಾಕೂಟಕ್ಕೆ ಅರ್ಹತೆ ಪಡೆಯುವ ವಿಧಾನವನ್ನು ಸಮ್ಮೇಳನದಲ್ಲಿ ಚರ್ಚಿಸುವ ಸಾಧ್ಯತೆಯಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>